ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 7/10/20

## ಸಂಸದ ಡಿ.ಕೆ.ಸುರೇಶ್‌ಗೆ ಕೊರೋನಾ, ಈಗ ಸಿಬಿಐ ಅಧಿಕಾರಿಗಳಿಗೆ ಆತಂಕ

ಬೆಂಗಳೂರು:ಕಾಂಗ್ರೆಸ್ ಸಂಸದ ಡಿ.ಕೆ.ಸುರೇಶ್‌ಗೆ ಮಂಗಳವಾರ ಕೊರೋನಾ ಸೋಂಕು ದೃಢಪಟ್ಟಿದ್ದು ಚಿಕಿತ್ಸೆಗಾಗಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಇದರಿಂದಾಗಿ ಅವರ ಆಸ್ತಿಪಾಸ್ತಿಗಳ ಮೇಲೆ ದಾಳಿ ಮಾಡಿದ್ದ ಸಿಬಿಐ ಅಧಿಕಾರಿಗಳಿಗೂ ಸೋಂಕಿನ ಆತಂಕ ಶುರುವಾಗಿದೆ. ಕೋವಿಡ್ ಪರೀಕ್ಷೆಯಲ್ಲಿ ತಮಗೆ ಪಾಸಿಟಿವ್ ವರದಿ ಬಂದಿರುವ ಬಗ್ಗೆ ಸ್ವತಃ ಟ್ವೀಟ್ ಮಾಡಿರುವ ಡಿ.ಕೆ. ಸುರೇಶ್‌ಅವರು, 'ಕೋವಿಡ್ ಪರೀಕ್ಷೆಯಲ್ಲಿ ನನಗೆ ಸೋಂಕು ದೃಢಪಟ್ಟಿದೆ. ಸದ್ಯಕ್ಕೆ ನನ್ನ ಆರೋಗ್ಯ ಸ್ಥಿರವಾಗಿದೆ ಹಾಗೂ ಸುರಕ್ಷಿತವಾಗಿ ಇದ್ದೇನೆ. ಕೆಲವು ದಿನಗಳಿಂದ ನನ್ನ ಸಂಪರ್ಕದಲ್ಲಿ ಇದ್ದ ಸ್ನೇಹಿತರು, ಬಂಧುಗಳು ಹಾಗೂ ನನ್ನ ಜೊತೆಗೆ ಇದ್ದ ಸಿಬಿಐ ಅಧಿಕಾರಿಗಳು, ಮಾಧ್ಯಮ ಮಿತ್ರರು ಪರೀಕ್ಷೆ ಮಾಡಿಸಿಕೊಳ್ಳುವಂತೆ ವಿನಂತಿಸಿಕೊಳ್ಳುತ್ತೇನೆ' ಎಂದು ಹೇಳಿದ್ದಾರೆ.

